ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/27/ರಾಸೇಯೋ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿ:26.05.2017

# ಸುತ್ತೋಲೆ

ವಿಷಯ: ಜೀವನ ಕೌಶಲ್ಯ ತರಬೇತಿಗೆ ಸರ್ಕಾರಿ ಕಾಲೇಜುಗಳ ಅಧ್ಯಾಪಕರನ್ನು ನಿಯೋಜಿಸುವ ಬಗ್ಗೆ

ಉಲ್ಲೇಖ: ರಾಜ್ಯ ಎನ್.ಎಸ್.ಎಸ್ ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರ ಪತ್ರ ಸಂಖ್ಯೆ:ಯುಸೇಇ/ರಾಸೇಯೋ/ನಿಮ್ಹಾನ್ಸ್/2017-18/68, ದಿನಾಂಕ:20.05.2017

* * * * *

2017-18ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ, ರಾಜ್ಯ ಘಟಕ ಹಾಗೂ ನಿಮ್ಹಾನ್ಸ್ ಸಹಯೋಗದೊಂದಿಗೆ ಎನ್.ಎಸ್.ಎಸ್. ಯೋಜನಾಧಿಕಾರಿಗಳ ಮೂಲಕ **"ಜೀವನ ಕೌಶಲ್ಯ"** ತರಬೇತಿಯನ್ನು **ದಿನಾಂಕ:29.05.2017 ರಿಂದ 03.06.2017ರವರೆಗೆ** ***ಲೆಕ್ಚರ್ ಹಾಲ್-1, ಎಪಿಡೀಮಿಯಾಲಜಿ ವಿಭಾಗ, ಜನ ಆರೋಗ್ಯ ಕೇಂದ್ರ ನಿಮ್ಹಾನ್ಸ್, ಬೆಂಗಳೂರು*** ಇಲ್ಲಿ ಆಯೋಜಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಸೂಚಿಸಲಾಗಿದೆ. ಸದರಿ ತರಬೇತಿಯಲ್ಲಿ ಭಾಗವಹಿಸಿದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂದನೆಗೊಳಪಟ್ಟು ಅನ್ಯಕಾರ್ಯ ನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಹೆಚ್ಚಿನ ವಿವರಗಳಿಗೆ: ಡಾ.ಗಣನಾಥ ಶೆಟ್ಟಿ, ರಾಜ್ಯ ಎನ್.ಎಸ್.ಎಸ್ ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.

ತಮ್ಮ ವಿಶ್ವಾಸಿ

26/5/17

ಆಯುಕ್ತರು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು.
2. ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಅಯುಕ್ತರ ಕಛೇರಿ, ಬೆಂಗಳೂರು.
4. ಶ್ರೀ ಶ್ರೀಕಾಂತ್, ಸಮನ್ವಯಾಧಿಕಾರಿಗಳು, ಕಾಲೇಜು ಶಿಕ್ಷಣ ಅಯುಕ್ತರ ಕಛೇರಿ, ಬೆಂಗಳೂರು.

ಪ್ರತಿಯನ್ನು:

1. ಡಾ. ಗಣನಾಥ ಶೆಟ್ಟಿ ರಾಜ್ಯ ಎನ್.ಎಸ್.ಎಸ್ ಅಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.